ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಶುಕ್ರವಾರ, ೭ನೇ ಅಕ್ಟೋಬರ್ ೧೯೮೮/ಆಶ್ವಯುಜ ೧೫, ೧೯೧೦ ಶಕ

ಸದನವು ವಿಧಾನ ಸೌಧದಲ್ಲಿರುವ ವಿಧಾನ ಸಭೆಯ ಸಭಾಂಗಣದಲ್ಲಿ ಬೆಳಿಗ್ಗೆ ೯-೦೫ಕ್ಕೆ ಸಮಾವೇಶಗೊಂಡಿತು.

[ಅಧ್ಯಕ್ಷರು (ಶ್ರೀ ಬಿ. ಜಿ. ಬಣಕಾರ್) ಪೀಠವನ್ನಲಂಕರಿಸಿದರು.]

ಚುಕ್ಕಿ ಗುರ್ತಿನ ಪ್ರಶ್ನೆಗಳಿಗೆ ಬಾಯಿ ಹೇಳಿಕೆಯ ಮೂಲಕ ನೀಡಲಾದ ಉತ್ತರಗಳು

ಪರಿಶಿಷ್ಟ ಜಾತಿ-ಪರಿಶಿಷ್ಟ ವರ್ಗದ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಹಾಸ್ಟೆಲ್‌ನ ತೊಂದರೆ

೨೯೬. ಶ್ರೀ ಎಂ. ಶಿವಣ್ಣ (ಹೆಚ್. ಡಿ. ಕೋಟೆ) — ಮಾನ್ಯ ಸಮಾಜ ಕಲ್ಯಾಣ; ಯುವಜನ ಸೇವಾ ಮತ್ತು ಕ್ರೀಡಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಕ್ಕೆ ಸೇರಿದ ಪಿ. ಯು. ಸಿ. ತರಗತಿಯಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯಗಳಲ್ಲದೆ ಬೇರೆ ಯಾವ ವಿದ್ಯಾರ್ಥಿನಿಲಯದಲ್ಲಿಯೂ ಪ್ರವೇಶ ಅವಕಾಶವಿಲ್ಲದೆ ತೊಂದರೆ ಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ?

ಆ) ಜಿಲ್ಲಾ ಕೇಂದ್ರಗಳಲ್ಲಾದರೂ ಪ್ರತ್ಯೇಕ ವಿದ್ಯಾರ್ಥಿನಿಲಯ ಪ್ರಾರಂಭಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ ?

ಇ) ಹಾಗಿದ್ದಲ್ಲಿ ಎಂದಿನಿಂದ ಪ್ರಾರಂಭಿಸಲಾಗುವುದು ?

ಶ್ರೀ ಪಿ. ಜಿ. ಆರ್. ಸಿಂಧ್ಯ (ಸಮಾಜ ಕಲ್ಯಾಣ ಸಚಿವರು). —

ಅ) ಬೆಂಗಳೂರು ನಗರ ಹೊರತುಪಡಿಸಿ ಬೇರೆ ಜಿಲ್ಲಾ ಕೇಂದ್ರಗಳಲ್ಲಿ ಪಿ.ಯು. ಸಿ. ವಿದ್ಯಾರ್ಥಿಗಳಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯಗಳು ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆದರೂ ಸಹ ಪಿ.ಯು.ಸಿ. ವಿದ್ಯಾರ್ಥಿಗಳು ಕಾಲೇಜು ವಿದ್ಯಾರ್ಥಿನಿಲಯಗಳು ಇರುವಲ್ಲಿ ಪ್ರವೇಶಾವಕಾಶ ಪಡೆಯುತ್ತಿದ್ದಾರೆ.

ಆ) ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಈಗಾಗಲೇ ಪೋಸ್ಟ್‌ಮೆಟ್ರಿಕ್ ನಂತರದ ಕಾಲೇಜು ವಿದ್ಯಾರ್ಥಿ ನಿಲಯಗಳನ್ನು ತೆರೆಯಲಾಗಿದ್ದು, ಅವುಗಳಲ್ಲಿ ಪಿ.ಯು.ಸಿ. ವಿದ್ಯಾರ್ಥಿಗಳನ್ನು ಸಹ ಸೇರಿಸಲಾಗುತ್ತಿದೆ. ಬೆಂಗಳೂರು ನಗರದಲ್ಲಿ ಪ್ರತ್ಯೇಕ ೧೦೦ ಸಂಖ್ಯೆಯ ಒಂದು ಪಿ.ಯು.ಸಿ. ವಿದ್ಯಾರ್ಥಿನಿಲಯ ೧೯೮೫-೮೬ನೇ ಸಾಲಿನಿಂದ ಪ್ರಾರಂಭಿಸಲಾಗಿದೆ. ಹೆಚ್ಚಿನ ಬೇಡಿಕೆ ಇರುವುದರಿಂದ ಬೆಂಗಳೂರಿನಲ್ಲಿ ಮತ್ತೊಂದು ಪಿ.ಯು.ಸಿ. ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ನಿಲಯವನ್ನು ೧೯೮೮-೮೯ರಲ್ಲಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಪಿ.ಯು.ಸಿ. ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲು ಜಿಲ್ಲಾ ಪರಿಷತ್‌ಗಳಿಂದ ಬರುವ ಪ್ರಸ್ತಾವನೆಯನ್ನು ಪರಿಶೀಲಿಸಿ ಹಣಕಾಸಿನ ಪರಿಸ್ಥಿತಿಯನ್ನು ಅವಲಂಬಿಸಿ ಹಂತಹಂತವಾಗಿ ಪ್ರಾರಂಭಿಸಲಾಗುವುದು.

ಇ) ಜಿಲ್ಲಾ ಪರಿಷತ್‌ನಿಂದ ಬರುವ ಬೇಡಿಕೆ ಪ್ರಸ್ತಾವನೆಯನ್ನು ಆವಲಂಬಿಸಿ ಹಂತಹಂತವಾಗಿ ಪಿ. ಯು. ಸಿ ವಿದ್ಯಾರ್ಥಿ ನಿಲಯ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

ಶ್ರೀ ಎಂ. ಶಿವಣ್ಣ.—ಮಾನ್ಯ ಅಧ್ಯಕ್ಷರೇ, ಮಾನ್ಯ ಸಚಿವರು ಸರ್ಕಾರದ ಗಮನಕ್ಕೆ ಬಂದಿದೆ ಎಂದು ಹೇಳಿದ್ದಾರೆ. ಅವರ ಗಮನಕ್ಕೆ ಬಂದಿದ್ದರೆ ಕ್ರಮ ತೆಗೆದುಕೊಳ್ಳುತ್ತಾರೆಂಬ ಭರವಸೆ ನನಗೆ ಇದೆ. ಇವತ್ತು ರಾಜ್ಯದಲ್ಲಿ ೫ ರಿಂದ ೧೦ನೇ ತರಗತಿಯಲ್ಲಿ ಓದುತ್ತಿರುವ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಪ್ರತ್ಯೇಕವಾಗಿ ವಿದ್ಯಾರ್ಥಿನಿಲಯಗಳು ಇವೆ. ಆದರೆ ಪಿ.ಯು.ಸಿಯಲ್ಲಿ ವ್ಯಾಸಂಗ ಮಾಡತಕ್ಕ ವಿದ್ಯಾರ್ಥಿಗಳಿಗೆ ಪ್ರತ್ಯೇಕ ವಿದ್ಯಾರ್ಥಿನಿಲಯಗಳು ಇಲ್ಲ. ಪಿ.ಯು.ಸಿ. ಮಂಡಲಿ ರಚನೆಯಾಗುವುದಕ್ಕೆ ಮೊದಲು ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಕೊಡುತ್ತಿದ್ದರು ಆದರೆ, ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಬರತಕ್ಕಂತಹ ವಿದ್ಯಾರ್ಥಿನಿಲಯಗಳಲ್ಲಿ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ಪ್ರವೇಶ ಕೊಡುತ್ತಿರಲಿಲ್ಲ ತಾವು ಬೆಂಗಳೂರು ನಗರದಲ್ಲಿ ಪಿ.ಯು.ಸಿ. ವಿದ್ಯಾರ್ಥಿಗಳಿಗೆ ವಿದ್ಯಾರ್ಥಿನಿಲಯವನ್ನು ಕಟ್ಟಿಸಲಾಗಿದೆ ಎಂದು ಹೇಳಿದ್ದೀರಿ.

ಅಧ್ಯಕ್ಷರು.—ಪ್ರಶ್ನೆ ಕೇಳಿ

ಶ್ರೀ ಎಂ. ಶಿವಣ್ಣ.—ನಾನು ಮಾನ್ಯ ಸಚಿವರಲ್ಲಿ ಕೇಳುವುದು ಇಷ್ಟೆ. ಪಿಯುಸಿ ನಲ್ಲಿ ವ್ಯಾಸಂಗ ಮಾಡುತ್ತಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಅವಶ್ಯಕತೆ ಇರುವ ಕಡೆಗಳಲ್ಲಿ ವಿದ್ಯಾರ್ಥಿನಿಲಯಗಳನ್ನು ಕಟ್ಟಿಸಿಕೊಡುವುದಕ್ಕೆ ಏರ್ಪಾಡು ಮಾಡುತ್ತೀರಾ ?

ಶ್ರೀ ಪಿ ಜಿ ಆರ್ ಸಿಂಧ್ಯ.—ಮಾನ್ಯ ಅಧ್ಯಕ್ಷರೇ ಪಿ.ಯು.ಸಿ. ನಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ವಸತಿ ಅವಕಾಶವನ್ನು ಕಾಲೇಜು ವಿದ್ಯಾರ್ಥಿಗಳು ಇರತಕ್ಕ ಹಾಸ್ಟೆಲುಗಳಲ್ಲಿ ಮಾಡಿಕೊಡಲಾಗಿದೆ. ಪಿಯುಸಿ ವ್ಯಾಸಂಗ ಮಹತ್ವದ ಘಟ್ಟವಾಗಿದ್ದು ಈ ಒಂದು ವರ್ಗದ ವಿದ್ಯಾರ್ಥಿಗಳಿಗೆ ಮುಂದಿನ ವ್ಯಾಸಂಗಕ್ಕೆ ಹೋಗುವುದಕ್ಕೆ ಅನುಕೂಲ ಮಾಡಿಕೊಡಬೇಕಾಗುತ್ತದೆ. ಆದಷ್ಟು ಬೇಗ ಈ ವಿಷಯದ ಕಡೆ ಗಮನ ಕೊಟ್ಟು, ಈ ಸಮಸ್ಯೆಯನ್ನು ಬಗೆಹರಿಸುತ್ತೇನೆ ಎನ್ನುವ ಆಶ್ವಾಸನೆಯನ್ನು ಮಾನ್ಯ ಸದಸ್ಯರಿಗೆ ಕೊಡುತ್ತೇನೆ.

ಶ್ರೀ ಬಿ ಬಸವಲಿಂಗಪ್ಪ —ಮಾನ್ಯ ಅಧ್ಯಕ್ಷರೇ, ಇದು ಸಮಾಜ ಕಲ್ಯಾಣ ಇಲಾಖೆಗೆ ಸೇರಿದ ವಿಚಾರ ವ್ಯಕ್ತಿಗತವಾಗಿ ಒಬ್ಬ ಸದಸ್ಯರಿಗೆ ಸಂಬಂಧಪಟ್ಟಿದ್ದರೂ ಇಂತಹ ಪ್ರಶ್ನೆ ಬಗ್ಗೆ ಕಟ್ಟುನಿಟ್ಟಾಗಿ ನಿಯಮವನ್ನು ಪಾಲನೆ ಮಾಡುವುದು ಸರಿಯಾಗಲ್ಲ. ಅದನ್ನು ಸಡಿಲ ಮಾಡಬೇಕು ಸಮಾಜ ಕಲ್ಯಾಣ ಇಲಾಖೆ ಸಂಬಂಧಪಟ್ಟಂತೆ ಮಾತನಾಡತಕ್ಕ ಸದಸ್ಯರು ಕಡಿಮೆ ಇದ್ದಾರೆ. ಈ ಸಭೆ ಸದನ ಈ ವಿಚಾರದಲ್ಲಿ ಹೆಚ್ಚು ಚರ್ಚೆ ಮಾಡಲಿಕ್ಕೆ ಪ್ರಶ್ನೆ ಕೇಳಲಿಕ್ಕೆ ಅವಕಾಶ ಕೊಟ್ಟರೆ ಒಳ್ಳೆಯದು.

ಅಧ್ಯಕ್ಷರು.—ನಾನು ಸದಸ್ಯನಾಗಿದ್ದಾಗ ೧೫ಕ್ಕೂ ಮೇಲ್ಪಟ್ಟು ಪ್ರಶ್ನೆಗಳನ್ನು ಕೇಳಿದ್ದೇನೆ. ನನಗೂ ಜವಾಬ್ದಾರಿ ಇದೆ ಪ್ರಶ್ನೋತ್ತರ ವೇಳೆಗೆಂದು ಒಂದು ಗಂಟೆ ಮಾತ್ರ ಅವಕಾಶ ಇದೆ. ವೇಳೆ ಮುಗಿದ ಮೇಲೆ ಪ್ರಶ್ನೆಗಳು ಲ್ಯಾಪ್ಸ್ ಆಗುತ್ತವೆ. ಪಾರ್ಲಿಮೆಂಟಿನಲ್ಲೂ ಮತ್ತು ಇತರೆ ರಾಜ್ಯಗಳಲ್ಲೂ ಇದೇ ರೀತಿಯ ವ್ಯವಸ್ಥೆ ಇದೆ. ಮಂತ್ರಿಗಳಿಂದ ಸರಿಯಾದ ಉತ್ತರ ಬರದೇ ಹೋದರೆ ಅರ್ಧ ತಾಸಿನ ಮೇಲೆ ಚರ್ಚೆ ಮಾಡುವುದಕ್ಕೆ ಅವಕಾಶ ಇದೆ. ಇವತ್ತು ೪-೫ ಗಮನ ಸೆಳೆಯುವ ಸೂಚನೆಗಳನ್ನು ಹಾಕಿದ್ದೇನೆ. ಕಾಲದ ಮಹತ್ವ ತಮಗೂ ಗೊತ್ತಿದೆ. ಆದಷ್ಟೂ ಸಂಕ್ಷಿಪ್ತವಾಗಿ ಪ್ರಶ್ನೆ ಕೇಳಿದರೆ ಎಲ್ಲರಿಗೂ ಅವಕಾಶ ಆಗುತ್ತದೆ.

ಶ್ರೀ ಬಿ ಬಸವಲಿಂಗಪ್ಪ —ಇಲ್ಲಿ ಅರ್ಧಗಂಟೆಯ ಚರ್ಚೆಯು ವಿಚಾರ ಬರುವುದಿಲ್ಲ. ಸದಸ್ಯರು ಕೇಳಿದ ಪ್ರಶ್ನೆ ಗೆ ಉತ್ತರ ಬಂದರೆ ಆಯಿತು ನಾನೂ ಒಂದು ಪ್ರಶ್ನೆಯನ್ನು ಕೇಳುತ್ತೇನೆ.

ಅಧ್ಯಕ್ಷರು. – ಕೇಳಿ

ಶ್ರೀ ಬಿ ಬಸವಲಿಂಗಪ್ಪ —ಮಾನ್ಯ ಅಧ್ಯಕ್ಷರೇ, ಕರ್ನಾಟಕ ರಾಜ್ಯದಲ್ಲಿ ಪಿ.ಯು.ಸಿ. ಯಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಎಷ್ಟು ? ಎಷ್ಟು ಜನ ಮಕ್ಕಳಿಗೆ ಹಾಸ್ಟಲ್‌ಗಳ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ ಇನ್ನು ಎಷ್ಟು ಜನ ವಿದ್ಯಾರ್ಥಿಗಳಿಗೆ ಹಾಸ್ಟಲ್‌ಗಳ ಸೌಕರ್ಯಗಳನ್ನು ಒದಗಿಸಬೇಕಾಗಿದೆ ಎನ್ನುವ ಅಂಕಿ ಸಂಖ್ಯೆಗಳನ್ನು ಕೊಟ್ಟರೆ ಒಳ್ಳೆಯದು.

ಶ್ರೀ ಪಿ. ಜಿ. ಆರ್. ಸಿಂಧ್ಯ.—ವಿಚಿತವಾದ ಅಂಕಿ ಅಂಶಗಳು ನನ್ನಲ್ಲಿ ಇಲ್ಲ. ಇದು ಶಿಕ್ಷಣ ಇಲಾಖೆಗೆ ಬರತಕ್ಕ ವಿಷಯ ವಿದ್ಯಾರ್ಥಿನಿಲಯಗಳನ್ನು ಸ್ಥಾಪನೆ ಮಾಡತಕ್ಕ ಸಂದರ್ಭದಲ್ಲಿ ಪ್ರಪೋರ್ಮ ನೇಟ್ ರೇಷಿಯೋ ಪ್ರಕಾರ.....

ಶ್ರೀ ಬಿ. ಬಸವಲಿಂಗಪ್ಪ.—ಏನು ಸ್ವಾಮಿ ಮಂತ್ರಿಗಳಾಗಿ.....

ಅಧ್ಯಕ್ಷರು.—ಕುಳಿತುಕೊಂಡು ಮಾತನಾಡುವುದು ಮೊದಲನೆಯ ತಪ್ಪು.

ಶ್ರೀ ಬಿ. ಬಸವಲಿಂಗಪ್ಪ.—ಮಾನ್ಯ ಸಿದ್ದರಾಮಯ್ಯನವರಿಗೆ ಈ ಒಂದು ವರ್ಗದ ಬಗ್ಗೆ ಹೆಚ್ಚಿನ ಆಸಕ್ತಿ ಇದ್ದರೆ ಒಳ್ಳೆಯದು ಅವರು ಅಡ್ಡಿ ಮಾಡಿ ಮಾತನಾಡುವುದು ಸರಿಯಿಲ್ಲ.

ಶ್ರೀ ಸಿದ್ದರಾಮಯ್ಯ.—ಸಮಾಜ ಕಲ್ಯಾಣ ಇಲಾಖೆಯ ವಿಚಾರಬಂದಾಗ ಮಾನ್ಯ ಬಸವಲಿಂಗಪ್ಪನವರು ನಿಂತಾ ಬಿಡುತ್ತಾರೆ ಅವರು ನಮಗಿಂತ ಹಿರಿಯರಿಂದ ಮಾತನಾಡುತ್ತಾರೆ. ನಾನು ಅವರಿಗೆ ಅಡ್ಡಿ ಬರಲಿಲ್ಲ.

ಶ್ರೀ ಎಂ. ಶಿವಣ್ಣ.—ಪಿಯುಸಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ರಾಜ್ಯದ ೩೦ ಜಿಲ್ಲೆಗಳಲ್ಲಿಯೂ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭ ಮಾಡುವುದಕ್ಕೆ ಸರ್ಕಾರದವರು ಕ್ರಮ ತೆಗೆದುಕೊಳ್ಳಬೇಕು. ಜಿಲ್ಲಾ ಪರಿಷತ್ತಿನ ಮೂಲಕ ಸರ್ಕಾರಕ್ಕೆ ಪ್ರಸ್ತಾವನೆ ಬರಬೇಕೆಂದರೆ ಕಷ್ಟವಾಗುತ್ತದೆ. ಗ್ರಾಮಾಂತರ ವಂಕ್ಕಳ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಸರ್ಕಾರ ಕ್ರಮ ತೆಗೆದುಕೊಳ್ಳಬೇಕೆಂದು ಹೇಳುತ್ತೇನೆ.

ಶ್ರೀ ಪಿ. ಜಿ ಆರ್. ಸಿಂಧ್ಯ.—ಮಾನ್ಯ ಅಧ್ಯಕ್ಷರೆ, ಈ ಇಲಾಖೆಯ ಮೇಲ್ವಿಚಾರಣೆಯನ್ನು ಜಿಲ್ಲಾ ಪರಿಷತ್‌ಗೆ ವಹಿಸಿಕೊಡಲಾಗಿದೆ. ಅದನ್ನು ವಾಪಸ್ಸು ತೆಗೆದುಕೊಳ್ಳುವುದಕ್ಕೆ ಆಗುವುದಿಲ್ಲ ಪ್ರಸ್ತಾವನೆಯನ್ನು ಗಮನದಲ್ಲಿಟ್ಟುಕೊಂಡು ಈ ಸಮಸ್ಯೆಯನ್ನು ಮುಂದಿನ ಅಧಿವೇಶನದೊಳಗೆ ಬಗೆಹರಿಸುವುದಕ್ಕೆ ಪ್ರಯತ್ನ ಮಾಡುತ್ತೇನೆ.

ಗುಲ್ಬರ್ಗಾ ಜಿಲ್ಲೆಯ ಸಾರಿಗೆ ಸಂಸ್ಥೆಯ ಸಿಬ್ಬಂದಿ ಹಾಗೂ ಬಸ್ಸುಗಳ ಬಗ್ಗೆ

೪೦೭೧. ಶ್ರೀ ಮಾಲೀಕಯ್ಯ ವಿ. ಗುತ್ತೇದಾರ್ (ಅಫಜಲ್‌ಪುರ).—ಮಾನ್ಯ ಸಾರಿಗೆ ಸಚಿವರ ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಗುಲ್ಬರ್ಗಾ ಜಿಲ್ಲೆಯಲ್ಲಿ ಎಷ್ಟು ಹೊಸ ಸರಕಾರಿ ಬಸ್ಸುಗಳನ್ನು ಹಾಕಲಾಗಿದೆ ? ಅವುಗಳಲ್ಲಿ ಎಷ್ಟು ದುರಸ್ತಿಯಲ್ಲಿವೆ.

ಆ) ಈ ಜಿಲ್ಲೆಯ ಸಾರಿಗೆ ಸಂಸ್ಥೆ ವಿಭಾಗದ ಡಿವಿಜನಲ್ ಕಂಟ್ರೋಲರ್‌ರವರ ಅವ್ಯವಹಾರವು ಸರ್ಕಾರದ ಗಮನಕ್ಕೆ ಬಂದಿದೆಯೇ ? ಈ ಬಗ್ಗೆ ಏನು ಕ್ರಮ ಕೈಗೊಳ್ಳಲಾಗಿದೆ ?

ಶ್ರೀ ಸಿದ್ದರಾಮಯ್ಯ (ಸಾರಿಗೆ ಮಂತ್ರಿಗಳು).—

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಗುಲ್ಬರ್ಗಾ ವಿಭಾಗದಲ್ಲಿ ಹಾಲಿ ೬೨೯ ವಾಹನಗಳನ್ನು ಹಾಕಲಾಗಿದ್ದು ಈ ಪೈಕಿ ೫೭೫ ಗಾಡಿಗಳು ಓಡುತ್ತಿವೆ ಮಿಕ್ಕ ೫೪ ವಾಹನಗಳು ದುರಸ್ತಿಯಲ್ಲಿವೆ ಈ ವಿಭಾಗವು ದಿನಾಂಕ ೭-೧೧-೮೫ರಂದು ರಾಷ್ಟ್ರೀಕರಣವಾಯಿತು ಅಂದಿನಿಂದ ಇಂದಿನವರೆಗೆ ಈ ವಿಭಾಗಕ್ಕೆ ಹಾಕಿರುವ ಹೊಸ ಬಸ್ಸುಗಳ ವಿವರ ಈ ಕೆಳಕಂಡಂತಿದೆ.

೧೯೮೪-೮೫	೪೩
೧೯೮೫-೮೬	೯೮
೧೯೮೬-೮೭	೧೦೪
೧೯೮೭-೮೮	೭೨
೧೯೮೮-೮೯	೩೮ (ಏಪ್ರಿಲ್‌ನಿಂದ ಸೆಪ್ಟೆಂಬರ್‌ವರೆಗೆ)

ಆ) ಬಂದಿದೆ ಪ್ರಾರಂಭಿಕ ವಿಚಾರಣೆಯನ್ನು ಈಗಾಗಲೇ ಮಾಡಿ ಇಲಾಖಾ ಕ್ರಮವನ್ನು ಜರುಗಿಸಲಾಗುತ್ತಿದೆ.